*

**ಓಎಸ್ ನಂಃ 4/2023**
**ಪಿಡಬ್ಲೂಃ 1**

**<u>ಸಾಕ್ಷಿಗೆ ದಿನಾಂಕ 05-02-2026 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು</u>**

**<u>ಮುಖ್ಯ ವಿಚಾರಣೆ ವಾದಿ ಪರ ಶ್ರೀ ಡಿಡಿ ವಕೀಲರಿಂದ</u>**

ನಾನು ನನ್ನ ಸಾಕ್ಷ್ಯವನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದ ವಿಷಯಗಳು ಸತ್ಯ ಮತ್ತು ನಿಜ ಇರುತ್ತದೆ ಆದ್ದರಿಂದ ಸದರಿ ನನ್ನ ಪ್ರಮಾಣ ಪತ್ರವನ್ನು ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಬೇಕಾಗಿ ಪ್ರಾರ್ಥಿಸುತ್ತೇನೆ. ನಾನು ಈ ಕೆಳಗಿನ ದಾಖಲಾತಿಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸುತ್ತಿದ್ದೇನೆ.

ಸರ್ವೆ ನಂಬರ್ 223/3ರ 6 ಕೈಬರಹದ ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-1 ರಿಂದ 6 ಎಂದು, ತಹಶೀಲ್ದಾರ್ ಚಿತ್ತಾಪುರ್ ರವರು ನೀಡಿದ ಹಿಂಬರಹವನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 7 ಎಂದು, ಸರ್ವೆ ನಂಬರ್ 223/3ರ 7 ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-8 ರಿಂದ 14 ಎಂದು,MR No.14/2008-2009 ಹಾಜರುಪಡಿಸಿದ್ದು ಅದನ್ನು ನಿಪಿ-15 ಎಂದು, ಸರ್ವೆ ನಂಬರ್ 223/3 ನೇದ್ದರ 15 ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-16ರಿಂದ 30 ಎಂದು, ವಾದಿಯು ಉಪ ತಹಶೀಲ್ದಾರ್ ನಾಲ್ವಾರ್ ಇವರಿಗೆ ಬರೆದ ಅರ್ಜಿಯ ಸ್ವೀಕರಿಸಿದ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 31 ಎಂದು, ಪ್ರತಿವಾದಿಯರಿಗೆ ನೀಡಿದ ಲೀಗಲ್ ನೋಟೀಸ್ ನ ಕಛೇರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 32 ಎಂದು, ಸದರಿ ಲೀಗಲ್ ನೋಟೀಸ್ ಗಳನ್ನು ಪ್ರತಿವಾದಿಯರಿಗೆ ಕಳುಹಿಸಿದ ಬಗ್ಗೆ ನೀಡಿದ ಅಂಚೆ ರಶೀದಿಗಳನ್ನು ನಿಪಿ- 33 ರಿಂದ 35 ಎಂದು, ಸದರಿ ಲೀಗಲ್ ನೋಟೀಸ್ ಪ್ರತಿವಾದಿಯರಿಗೆ ತಲುಪಿದ ಬಗ್ಗೆ ನೀಡಿದ ಅಂಚೆ ಸ್ವೀಕೃತಿ ಪತ್ರಗಳನ್ನು ನಿಪಿ- 36 ರಿಂದ 38 ಎಂದು ಗುರುತಿಸಲಾಯಿತು.

**ಆದ್ದರಿಂದ ದಾವೆಯಲ್ಲಿ ಕೇಳಿರುವಂತೆ ಪರಿಹಾರ ನೀಡಲು ಕೋರಿಕೊಳ್ಳುತ್ತೇನೆ.**

ಪ್ರತಿವಾದಿ ಪರ ವಕೀಲರು ಪಾಟೀ ಸವಾಲಿಗೆ ಸಮಯ ಕೋರಿದ್ದು, ಸಮಯ ನೀಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

ಓ. ಹೇ . ಕೇ. ಸರಿ ಇದೆ.

ಸಿವಿಲ್ ನ್ಯಾಯಾಧೀಶರು,
ಚಿತ್ತಾಪೂರ.